ಈ) ಈ ತಕ್ಷಣದಲ್ಲಿ ವೆನಿಲ್ಲಾ ಬೆಳೆಗೆ ಬೆಂಬಲ ಬೆಲೆ ಘೋಷಣೆ ಮಾಡಿ ಸರ್ಕಾರ ಖರೀದಿ ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಆರ್. ಶ್ರೀನಿವಾಸ್ (ತೋಟಗಾರಿಕೆ ಸಚಿವರು)

ಅ) ಬಂದಿದೆ.

ಆ) ಹೌದು.

ಇ) ಅಂತಹ ಪ್ರಸ್ತಾವನೆ ಪರಿಶೀಲನೆಯಲ್ಲಿಲ್ಲ.

ಈ) ಇಲ್ಲ.

542(1067) ಶ್ರೀ ಜೀವರಾಜ ಡಿ.ಎನ್. (ಶೃಂಗೇರಿ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು);

ಆ) ಬಹಳಷ್ಟು ಗ್ರಾಮಗಳಲ್ಲಿ ಅಂಗನವಾಡಿ ಕೇಂದ್ರಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಗ್ರಾಮಗಳಲ್ಲಿ ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಕಾಲಮಿತಿಯೊಳಗೆ ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀಮತಿ ಭಾಗೀರಥಿ ಮರಳಸಿದ್ಧನಗೌಡ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ 1226 ಅಂಗನವಾಡಿ ಕೇಂದ್ರಗಳು ಇವೆ. ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ.

| | |
|---|---|
| ಚಿಕ್ಕಮಗಳೂರು | 298 |
| ಕಡೂರು | 259 |
| ಕೊಪ್ಪ | 100 |
| ಮೂಡಿಗೆರೆ | 161 |
| ಎನ್.ಆರ್. ಪುರ | 68 |
| ಶೃಂಗೇರಿ | 100 |
| ತರೀಕೆರೆ | 240 |

ಆ) ಹೌದು.

ಇ) ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗುತ್ತಿದೆ. ಕೇಂದ್ರ ಸರ್ಕಾರದ ವತಿಯಿಂದ ಮಂಜೂರಾತಿ ದೊರೆತ ನಂತರ ಅಂಗನವಾಡಿ ಕೇಂದ್ರಗಳನ್ನು ತೆರೆಯಲಾಗುತ್ತದೆ.